# ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ರವರ ನ್ಯಾಯಾಲಯ, ಹಿರಿಯೂರು

## ಸಿ.ಸಿ ಸಂಖ್ಯೆಃ 1096/2020

| | | | |
|---|---|---|---|
| ಸಾಕ್ಷಿದಾರರ ಹೆಸರು | - | ರಂಗನಾಥ | ಸಿಡಬ್ಲ್ಯೂ-5 |
| ತಂದೆಯ/ಗಂಡನ ಹೆಸರು | - | ಸುಬ್ರಮಣಿ | ಪಿಡಬ್ಲ್ಯೂ-5 |
| ವಯಸ್ಸು | - | ಸು. 44 ವರ್ಷ | ಪ್ರ.ವ.ಬೋ ದಿನಾಂಕಃ22.08.2024 |
| ಉದ್ಯೋಗ | - | ಕಿರಾಣಿ ಅಂಗಡಿ ವ್ಯಾಪಾರ | |
| ವಾಸ | - | ಬಬ್ಬೂರು | |

**ಮುಖ್ಯ ವಿಚಾರಣೆಃ ಮಾನ್ಯ ಎಪಿಪಿಯವರಿಂದಃ-**

ಸಾಕ್ಷಿಗೆ ನಿಪಿ-2 ಮತ್ತು 3 ರ ದಾಖಲೆಗಳನ್ನು ತೋರಿಸಿದ್ದು, ಅವುಗಳಲ್ಲಿರುವ ತನ್ನ ಸಹಿಗಳನ್ನು ಸಾಕ್ಷಿ ನೋಡಿ ಗುರುತಿಸಿದ್ದರಿಂದ ನಿಪಿ-2 ಮತ್ತು 3 ರಲ್ಲಿರುವ ಸಾಕ್ಷಿಯ ಸಹಿಗಳನ್ನು **ನಿಪಿ-2(ಸಿ) ಮತ್ತು ನಿಪಿ-(ಸಿ)** ಎಂದು ಗುರುತಿಸಲಾಯಿತು. ನಿಪಿ-2 ಮತ್ತು 3 ಕ್ಕೆ ಈಗ ಸುಮಾರು 4 ವರ್ಷಗಳ ಹಿಂದೆ ಗುಯಿಲಾಳು ಟೋಲ್ ಪ್ಲಾಜಾದ ಬಳಿ ಸಹಿ ಮಾಡಿದ್ದೇನೆ. ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿಲ್ಲ, ಯಾವುದೇ ನಕಾಶೆ ತಯಾರಿಸಿರುವುದಿಲ್ಲ. ಪಂಚನಾಮೆಯಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿಲ್ಲ.

(ಈ ಹಂತದಲ್ಲಿ ಮಾನ್ಯ ಎಪಿಪಿರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ-ಸವಾಲು ಮಾಡಲು ಅನುಮತಿ ಕೋರಿದ್ದಾರೆ. ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ-ಸವಾಲಿನಲ್ಲಿ ಕೇಳುವ ಪ್ರಶ್ನೆಗಳನ್ನು ಕೇಳಲು ಅನುಮತಿ ನೀಡಲಾಯಿತು).

**ಪಾಟೀ-ಸವಾಲುಃ ಮಾನ್ಯ ಎಪಿಪಿಯವರಿಂದಃ-**

ದಿನಾಂಕಃ25.05.2019 ರಂದು ಮಧ್ಯಾಹ್ನ 3.00 ಗಂಟೆಗೆ ಪೊಲೀಸ್‌ರು ಅಪಘಾತ ಸ್ಥಳವಾದ ಗುಯಿಲಾಳು ಟೋಲ್ ಪ್ಲಾಜಾ ಬಳಿ ಭೇಟಿ ನೀಡಿದ್ದು ಅಲ್ಲಿ ಚಾಸಾ-2 ರವರು ತೋರಿಸಿಕೊಟ್ಟಂತೆ ನಮ್ಮ

ಸಮಕ್ಷಮ ನಿಪಿ-2 ರಂತೆ ಸ್ಥಳ ಪಂಚನಾಮೆ ಮಾಡಿ ನಿಪಿ-3 ರಂತೆ ಕಚ್ಚಾ ನಕಾಶೆಯನ್ನು ತಯಾರಿಸಿ ಸ್ಥಳದಲ್ಲಿ ನಮ್ಮ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ-ಸವಾಲುಃ ಆರೋಪಿ ಪರ ವಕೀಲರಿಂದ ಇರುವುದಿಲ್ಲ.**

**ಮರು ವಿಚಾರಣೆಃ ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಮುಕ್ತ ಹೇಳಿಕೆ ಮತ್ತು ನನ್ನ ಉಕ್ತಲೇಖನಕ್ಕೆ ತಕ್ಕಂತೆ ಬೆರಳಚ್ಚು ಮಾಡಿಸಲಾಯಿತು).

ಓ ಹೇ ಕೇ ಸರಿ ಇದೆ

ಸಿ/ಸಿ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ., ಹಿರಿಯೂರು.